# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2072 |
| ಸದಸ್ಯರ ಹೆಸರು | : | ಡಾ: ಉಮಾಶ್ರೀ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 25-03-2026 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬಾಗಲಕೋಟೆ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ-367 ರ ರಸ್ತೆ ವಿಸ್ತರಣೆ ಕಾಮಗಾರಿ ನಡೆದಿದ್ದು ಈ ರಸ್ತೆಯ ಪಕ್ಕದಲ್ಲಿ ವಾಸಿಸುವ ಜನರು ನಿತ್ಯದ ಆದಾಯ ನಂಬಿ ಜೀವನ ಸಾಗಿಸುವವರಾಗಿದ್ದು ಬಹುತೇಕ ಅಲ್ಪ ಸಂಖ್ಯಾತ, ಹಿಂದುಳಿದ, ದಲಿತ ಕುಟುಂಬಗಳು ವಾಸಿಸುತ್ತಿರುವ ಸುಮಾರು 495 ಕ್ಕೂ ಅಧಿಕ ಬಡ ಕುಟುಂಬಗಳು ಈ ಕಾಮಗಾರಿಯಿಂದ ಮನೆಯನ್ನು ಕಳೆದುಕೊಂಡಿದ್ದು, ಇವರಿಗೆ ಬದಲಿ ನಿವೇಶನ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ. | ಬಾಗಲಕೋಟೆ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ-367ರ ರಸ್ತೆ ಪಕ್ಕದಲ್ಲಿ ವಾಸಿಸುವ ಸುಮಾರು 495 ಕ್ಕೂ ಅಧಿಕ ಬಡ ಕುಟುಂಬಗಳು ಈ ಕಾಮಗಾರಿಯಿಂದ ಮನೆಯನ್ನು ಕಳೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಜಿಲ್ಲಾಡಳಿತದ ವತಿಯಿಂದ ಬದಲಿ ಜಾಗೆಯನ್ನು ಗುರುತಿಸಿ ಎಲ್ಲ ಫಲಾನುಭವಿಗಳಿಗೆ ಬದಲಿ ನಿವೇಶನ ನೀಡುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.<br><br>ಈ ಹಿಂದೆ ಶಾಸಕರಾಗಿದ್ದ ದಿವಂಗತ ಶ್ರೀ ಎಚ್.ವೈ ಮೇಟಿಯವರ ಸಮ್ಮುಖದಲ್ಲಿ ನಡೆದ ಬಿ.ಟಿ.ಡಿ.ಎ. ಸಭೆಯಲ್ಲಿ, ಈ ಯೋಜನೆಯ ಅನುಷ್ಠಾನದ ಸಮಯದಲ್ಲಿ, ಸರಪಳಿ 144+350 ರಿಂದ 144+600 ರವರೆಗೆ ಭೂಮಿ ಹಾಗೂ ಮನೆ ಕಳೆದುಕೊಂಡ ನಿರಾಶ್ರಿತರಿಗೆ ಕೇವಲ ಹಣದ ರೂಪದಲ್ಲಿ ಪರಿಹಾರವನ್ನು ನೀಡಲು ಅವಕಾಶ ಹೊಂದಿದೆ ಎಂದು ತಿಳಿಸಲಾಯಿತು. ಆದರೆ ಭೂಮಾಲೀಕರು ಪರಿಹಾರವನ್ನು ಹಣದ ರೂಪದ ಬದಲಾಗಿ ಹೊಸ ಭೂಮಿಯ ರೂಪದಲ್ಲಿ ನೀಡುವಂತೆ ವಿನಂತಿಸಿದ್ದರು. ಈ ಸಭೆಯಲ್ಲಿ, ಬಿ.ಟಿ.ಡಿ.ಎ. ಯಿಂದ ನಗರಸಭೆಗೆ ಸುಮಾರು 495 ಕುಟುಂಬಗಳಿಗೆ 12 ಎಕರೆ ಭೂಮಿಯನ್ನು ಹಂಚಿಕೆ ಮಾಡಲು ನಿರ್ಧರಿಸಲಾಯಿತು. ಮಾನ್ಯ ಶಾಸಕ ಶ್ರೀ ಎಚ್.ವೈ. ಮೇಟಿಯವರ ಅಕಾಲಿಕ ನಿಧನದ ನಂತರ ಮಾನ್ಯ ಶಾಸಕರ ಅನುಪಸ್ಥಿತಿಯ ಕಾರಣದಿಂದಾಗಿ, ಹೊಸದಾಗಿ ಚುನಾಯಿತರಾದ ಶಾಸಕರು ಅಧಿಕಾರ ವಹಿಸಿಕೊಂಡ ನಂತರ ಭೂ ಪರಿಹಾರ ಪ್ರಕ್ರಿಯೆಯು ಪುನರಾರಂಭಗೊಳ್ಳಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆ. |
| ಆ) | ಈ ರಸ್ತೆಯ ವಿಸ್ತರಣೆ ಕಾಮಗಾರಿ ಸಂದರ್ಭದಲ್ಲಿ ಇಲ್ಲಿನ ಸುಮಾರು 495ಕ್ಕೂ ಅಧಿಕ ಬಡ ಕುಟುಂಬಗಳಿಗೆ 12 ಎಕರೆ ಜಾಗವನ್ನು ಗುರುತಿಸಿ ಬಿ.ಟಿ.ಡಿ.ಎ. **(Bagalkote Town Development Authority)** ಯಿಂದ ನಗರಸಭೆಗೆ ಹಸ್ತಾಂತರಿಸುವ ತೀರ್ಮಾನ ಮಾಡಲಾಗಿತ್ತಾದರೂ ಅದರ ಪ್ರಕ್ರಿಯೆಗಳು ಆರಂಭಗೊಂಡಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಪ್ರಕ್ರಿಯೆಯನ್ನು ಯಾವಾಗ ಮಾಡಲಾಗುವುದು; ಈ ರೀತಿ ವಿಳಂಬವಾಗಲು ಕಾರಣಗಳೇನು? | |

ಸಂಖ್ಯೆ: ಲೋಇ 202 ಸಿಎಸ್‌ಹೆಚ್ 2026 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು